# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1625 (1789)** |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 23.03.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಎಷ್ಟು ಅನುದಾನಿತ ಪ್ರೌಢ ಶಾಲೆಗಳಲ್ಲಿ "ಡಿ" ಗ್ರೂಪ್ ಹುದ್ದೆಗಳು ಖಾಲಿ ಉಳಿದಿರುತ್ತವೆ; (ಶಾಲಾವಾರು ಮಾಹಿತಿ ನೀಡುವುದು); | ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳಲ್ಲಿ ನೌಕರರ ನೇಮಕಾತಿ ಮತ್ತು ಸೇವಾ ನಿಬಂಧನೆಗಳು, ಷರತ್ತುಗಳು) ನಿಯಮ 1999 ರ ಅನುಬಂಧ-IVರಲ್ಲಿನ ಪ್ರೌಢಶಾಲೆ ಸಿಬ್ಬಂದಿ ಮಾದರಿ ರಚನೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 8 ಎಸ್ ಇಪಿ 2015, ದಿನಾಂಕ:26-09-2017ರಂದು ತಿದ್ದುಪಡಿ ಮಾಡುವ ಮೂಲಕ ಡಿ-ಗ್ರೂಪ್ ಹುದ್ದೆಯನ್ನು ಸಿಬ್ಬಂದಿ ಮಾದರಿ ರಚನೆಯಲ್ಲಿ ತೆಗೆದು ಹಾಕಲಾಗಿದೆ. ಈ ಹಿನ್ನಲೆಯಲ್ಲಿ ಅನುದಾನಿತ ಪ್ರೌಢಶಾಲೆಗಳಲ್ಲಿ "ಡಿ" ಗ್ರೂಪ್ ಹುದ್ದೆಗಳನ್ನು ಖಾಯಂ ಆಗಿ ನೇಮಕಾತಿ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ. |
| ಆ) | ಸದರಿ ಖಾಲಿ ಹುದ್ದೆಗಳು ಭರ್ತಿಯಾಗದೇ ಇರುವುದರಿಂದ ಶಾಲೆಗಳಲ್ಲಿ ಮುಖ್ಯ ಶಿಕ್ಷಕರಿಗೆ ಮತ್ತು ಶಿಕ್ಷಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ತೊಂದರೆಯನ್ನು ಬಗೆಹರಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು; (ವಿವರ ನೀಡುವುದು); | ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳಲ್ಲಿ ನೌಕರರ ನೇಮಕಾತಿ ಮತ್ತು ಸೇವಾ ನಿಬಂಧನೆಗಳು, ಷರತ್ತುಗಳು) ನಿಯಮ 1999 ರ ಅನುಬಂಧ-IVರಲ್ಲಿನ ಪ್ರೌಢಶಾಲೆ ಸಿಬ್ಬಂದಿ ಮಾದರಿ ರಚನೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 8 ಎಸ್ ಇಪಿ 2015, ದಿನಾಂಕ:26-09-2017ರಲ್ಲಿ ಅನುದಾನಿತ ಪ್ರೌಢಶಾಲೆಗಳಲ್ಲಿ "ಡಿ" ಗ್ರೂಪ್ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಂಡು ಶಾಲೆಯ ದೈನಂದಿನ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಅವಕಾಶ ಕಲ್ಪಿಸಿದೆ. |
| ಇ) | ಸದರಿ "ಡಿ" ಗ್ರೂಪ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರಕ್ಕೆ ಇರುವ ತೊಂದರೆಗಳೇನು; | |

---2

| | | |
|---|---|---|
| ಈ) | ಅನುದಾನಿತ ಪ್ರೌಢಶಾಲೆಗಳಲ್ಲಿ ಅನುಕಂಪದ ಆಧಾರದ ಮೇಲೆ ದ್ವಿ.ದ.ಸ ಹುದ್ದೆಯನ್ನು ಭರ್ತಿ ಮಾಡಲು ಅವಕಾಶ ನೀಡಿದ್ದು. ಆದರೆ, ಅನುಕಂಪದ ಆಧಾರದ ಮೇಲೆ "ಡಿ" ಗ್ರೂಪ್ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅವಕಾಶ ನೀಡದೇ ಇರುವುದಕ್ಕೆ ಕಾರಣಗಳೇನು? | ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳಲ್ಲಿ ನೌಕರರ ನೇಮಕಾತಿ ಮತ್ತು ಸೇವಾ ನಿಬಂಧನೆಗಳು, ಷರತ್ತುಗಳು) ನಿಯಮ 1999 ರ ಅನುಬಂಧ-IVರಲ್ಲಿನ ಪ್ರೌಢಶಾಲೆ ಸಿಬ್ಬಂದಿ ಮಾದರಿ ರಚನೆಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 8 ಎಸ್ಇಪಿ 2015, ದಿನಾಂಕ:26-09-2017ರಂದು ತಿದ್ದುಪಡಿ ಮಾಡುವ ಮೂಲಕ ಡಿ-ಗ್ರೂಪ್ ಹುದ್ದೆಯನ್ನು ಸಿಬ್ಬಂದಿ ಮಾದರಿ ರಚನೆಯಲ್ಲಿ ತೆಗೆದು ಹಾಕಲಾಗಿರುವುದರಿಂದ ಅನುಕಂಪದ ನೇಮಕಾತಿಗೆ ಅವಕಾಶವಿರುವುದಿಲ್ಲ. |

ಸಂಖ್ಯೆ:ಇಪಿ 100 ಎಸ್ಇಎಸ್ 2026

**(ಎಸ್. ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು,